ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/93/ತರಗತಿ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿರಸ್ತೆ, ಬೆಂಗಳೂರು
ದಿನಾಂಕ: 28.07.2017

## ಸುತ್ತೋಲೆ

ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧಿಸುತ್ತಿರುವ ತರಗತಿಗಳನ್ನು ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರತಿ ದಿನ ಬೆಳಗ್ಗೆ 8.00 ಗಂಟೆಯಿಂದ ಪ್ರಾರಂಭಿಸುವಂತೆ ಸೂಚಿಸಲಾಗಿತ್ತು. ಆದರೆ ಹಲವಾರು ಕಾಲೇಜುಗಳಿಂದ ವೇಳಾಪಟ್ಟಿ ಅನುಷ್ಠಾನಗೊಳಿಸಿದ ಮೇಲೆ ಮಲೆನಾಡು, ಕರಾವಳಿ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥೆಯಲ್ಲಿ ತೊಂದರೆಯಾಗುತ್ತಿದೆ ಎಂದು ಮನವಿಗಳು ಸಲ್ಲಿಸಲಾಗುತ್ತಿದೆ. ಈ ವಿಚಾರವಾಗಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ಎಲ್ಲಾ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

1. ಈಗಾಗಲೇ ಎರಡು Shiftಗಳಲ್ಲಿ ತರಗತಿಗಳನ್ನು ನಡೆಸುತ್ತಿರುವ ಕಾಲೇಜುಗಳಲ್ಲಿ ಬೆಳಗಿನ ಬ್ಯಾಚ್‌ನ್ನು ಹಿಂದಿನಂತೆಯೇ ಬೆಳಗ್ಗೆ 8.00 ಗಂಟೆಗೆ ಪ್ರಾರಂಭಿಸಿಕೊಂಡು ಹೋಗುವುದು.
2. ಪ್ರಯೋಗಾಲಯ ತರಗತಿಗಳನ್ನು ಬೆಳಗ್ಗೆ 8.00 ಗಂಟೆ ವೇಳಾಪಟ್ಟಿಯಂತೆ ನಡೆಸಿಕೊಂಡು ಹೋಗಲು ಆದ್ಯತೆ ನೀಡುವುದು.
3. ಇನ್ನುಳಿದ ಎಲ್ಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥೆಯಲ್ಲಿ ಅನಾನುಕೂಲವಾಗುತ್ತಿರುವುದರಿಂದ ವಿದ್ಯಾರ್ಥಿಗಳ ಹಾಜರಾತಿ ಹಿತದೃಷ್ಟಿಯಿಂದ ಆಗಸ್ಟ್ 01 ರಿಂದ ಪ್ರತಿ ದಿನ ಬೆಳಗ್ಗೆ 9.00 ಗಂಟೆಗೆ ತರಗತಿಗಳನ್ನು ಪ್ರಾರಂಭಿಸುವುದು.
4. ವೇಳಾಪಟ್ಟಿ ಬದಲಾವಣೆಯಿಂದಾಗಿ ಪಠ್ಯೇತರ ಚಟುವಟಿಕೆಗಳಾದ ಎನ್‌ಎಸ್‌ಎಸ್, ಎನ್‌ಸಿಸಿ, ಕೌಶಲ್ಯಾಭಿವೃದ್ಧಿ ತರಬೇತಿ, ವಿಶೇಷ ತರಗತಿಗಳು, ಕ್ರೀಡಾ ಚಟುವಟಿಗಳನ್ನು ಯಾವುದೇ ರೀತಿಯಿಂದಲೂ ಕಡಿತಗೊಳಿಸತಕ್ಕದ್ದಲ್ಲ.

ಆಯುಕ್ತರು
28/7/17

**ಇವರಿಗೆ**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ಧಾರವಾಡ/ಕಲಬುರಗಿ/ಮಂಗಳೂರು/ಶಿವಮೊಗ್ಗ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಮೇಲ್ಕಂಡ ಸುತ್ತೋಲೆಯನ್ನು ಅನುಷ್ಠಾನಗೊಳಿಸಿರುವ ಬಗ್ಗೆ ವರದಿಯನ್ನು ಈ ಕಛೇರಿಗೆ ಸಲ್ಲಿಸುವುದು.
3. ಮಾಹಿತಿ ಮತ್ತು ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
4. ಕಛೇರಿ ಪ್ರತಿ.